ರಾಜ್ಯದ ಎಲ್ಲಾ ಪ್ರೌಢಶಾಲೆಗಳಿಗೂ ಕಂಪ್ಯೂಟರ್ ಶಿಕ್ಷಣ ವಿಸ್ತರಿಸುವುದು.

2624(2996) ಶ್ರೀ ಸಿ.ಬಿ. ಸುರೇಶ್ ಬಾಬು (ಚಿಕ್ಕನಾಯಕನ ಹಳ್ಳಿ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ಎಷ್ಟು ಪ್ರೌಢಶಾಲೆಗಳಲ್ಲಿ ಕಂಪ್ಯೂಟರ್ ಶಿಕ್ಷಣ ವಿಭಾಗ ತೆರೆಯಲಾಗಿದೆ;

ಆ) ಎಷ್ಟು ಪ್ರೌಢಶಾಲೆಗಳಿಗೆ ಕಂಪ್ಯೂಟರ್ ಒದಗಿಸಲಾಗಿದೆ ಮತ್ತು ಕಂಪ್ಯೂಟರ್ ಶಿಕ್ಷಕರನ್ನು ನೇಮಕ ಮಾಡಲಾಗಿದೆ;

ಇ) ರಾಜ್ಯದ ಎಲ್ಲಾ ಅನುದಾನಿತ ಖಾಸಗಿ ಪ್ರೌಢಶಾಲೆಗಳಿಗೂ ಈ ಸೌಲಭ್ಯವನ್ನು ವಿಸ್ತರಿಸಲು ಸರ್ಕಾರ ಪರಿಶೀಲಿಸುವುದೇ?

ಶ್ರೀ ಹೆಚ್. ವಿಶ್ವನಾಥ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ಮಾಹಿತಿ ಸಿಂಧು ಯೋಜನೆಯಡಿಯಲ್ಲಿ ರಾಜ್ಯ 1000 ಸರ್ಕಾರಿ ಪ್ರೌಢಶಾಲೆಗಳಲ್ಲಿ ಕಂಪ್ಯೂಟರ್ ಶಿಕ್ಷಣ ವಿಭಾಗ ತೆರೆಯಲಾಗಿದೆ;

ಆ) ಎಲ್ಲಾ 1000 ಸರ್ಕಾರಿ ಪ್ರೌಢಶಾಲೆಗಳಿಗೆ ಕಂಪ್ಯೂಟರ್ ಒದಗಿಸಲಾಗಿದ ಮತ್ತು ಎಲ್ಲಾ 1000 ಶಾಲೆಗಳಿಗೂ ಕಂಪ್ಯೂಟರ್ ಶಿಕ್ಷಕರನ್ನು ಖಾಸಗಿ ನಿರ್ವಹಣಾ ಸಂಸ್ಥೆಗಳ ಮೂಲಕ ಪ್ರತಿ ಶಾಲೆಗೆ ಇಬ್ಬರಂತೆ ನೇಮಕ ಮಾಡಲಾಗುವುದು.

ಇ) ಸದ್ಯದಲ್ಲಿ 1000 ಸರ್ಕಾರಿ ಪ್ರೌಢಶಾಲೆಗಳಲ್ಲಿ ಈ ಯೋಜನೆ ಜಾರಿಯಲ್ಲಿದ್ದು ಉಳಿದ ಸರ್ಕಾರಿ ಪ್ರೌಢಶಾಲೆಗಳಿಗೆ ಈ ಯೋಜನೆಯನ್ನು ವಿಸ್ತರಿಸಿದ ನಂತರ ಖಾಸಗಿ ಪ್ರೌಢಶಾಲೆಗಳಿಗೆ ಯೋಜನೆ ವಿಸ್ತರಿಸುವ ಬಗ್ಗೆ ಸರ್ಕಾರದ ಹಂತದಲ್ಲಿ ಪರಿಶೀಲಿಸಲಾಗುವುದು.

ಚಿಕ್ಕನಾಯಕನ ಹಳ್ಳಿ ತಾಲ್ಲೂಕನ್ನು ಜಿಲ್ಲಾ ಉಪ ನಿರ್ದೇಶಕರ ಶೈಕ್ಷಣಿಕ ವ್ಯಾಪ್ತಿಯಲ್ಲಿ ಉಳಿಸುವ ಬಗ್ಗೆ

2625(2997) ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಯಕನ ಹಳ್ಳಿ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಚಿಕ್ಕನಾಯಕನ ಹಳ್ಳಿ ತಾಲ್ಲೂಕಿನಲ್ಲಿ ಮಧುಗಿರಿ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖಾ ವ್ಯಾಪ್ತಿಗೆ ಮರುವಿಂಗಡಣೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;